RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**


| ಭಾಗ– IV-A | ಬೆಂಗಳೂರು, ಶುಕ್ರವಾರ, ಫೆಬ್ರವರಿ ೨೬, ೨೦೧೬ (ಫಾಲ್ಗುಣ ೭, ಶಕ ವರ್ಷ ೧೯೩೭) | ನಂ. ೩೨೮ |
|---|---|---|
| Part– IV-A | Bengaluru, Friday, February 26, 2016 (Palguna 7, Shaka Varsha 1937) | No. 328 |


ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಗ್ರಾಅಪ: 288: ಜಿಪಸ:2015, ಬೆಂಗಳೂರು, ದಿನಾಂಕ: 26–02–2016

**ಕರ್ನಾಟಕ ಪಂಚಾಯತ್ ರಾಜ್ ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ ತಿದ್ದುಪಡಿ ನಿಯಮಗಳು, 2016**

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ:14) ರ ಪ್ರಕರಣ 138ರೊಂದಿಗೆ ಓದಲಾದಂತೆ, ಪ್ರಕರಣ 311(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್ ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ನಿಯಮಗಳು, 2005ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಕರಡು ಅಧಿಸೂಚನೆ ಸಂಖ್ಯೆ: ಗ್ರಾಅಪ 288 ಜಿಪಸ 2015, ಬೆಂಗಳೂರು, ದಿನಾಂಕ: 21.01.2016 ರಂದು ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿದ್ದು ಆ ಮೂಲಕ ಬಾಧಿತರಾಗುವ ಸಂಭವವಿರುವ ವ್ಯಕ್ತಿಗಳಿಂದ ಮೂವತ್ತು ದಿನಗಳೊಳಗಾಗಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ:21.01.2016ರ ಕರ್ನಾಟಕ ವಿಶೇಷ ರಾಜ್ಯ ಪತ್ರವನ್ನು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಾಗಿರುತ್ತದೆ. ಸದರಿ ಕರಡು ನಿಯಮದ ಬಗ್ಗೆ ರಾಜ್ಯ ಸರ್ಕಾರಕ್ಕೆ ಯಾವುದೇ ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿರುವುದಿಲ್ಲ.

ಈಗ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 311(1)ರ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಕಂಡಂತೆ ಕರ್ನಾಟಕ ಪಂಚಾಯತ್ ರಾಜ್ ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ ತಿದ್ದುಪಡಿ ನಿಯಮಗಳನ್ನು ರಚಿಸುತ್ತದೆ.

ನಿಯಮಗಳು

1. **ಹೆಸರು ಮತ್ತು ಪ್ರಾರಂಭ:–** (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ನಿಯಮಗಳು, 2016 ಎಂದು ಕರೆಯತಕ್ಕದ್ದು.

   (2) ಅವು ಸರ್ಕಾರದ ರಾಜ್ಯ ಪತ್ರದಲ್ಲಿ ಅಂತಿಮ ಅಧಿಸೂಚನೆ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 3ಕ್ಕೆ ತಿದ್ದುಪಡಿ:**- ಕರ್ನಾಟಕ ಪಂಚಾಯತ್ ರಾಜ್ ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ ನಿಯಮಗಳು-2010ರ ನಿಯಮ 3ರ ಉಪನಿಯಮ (1)ರಲ್ಲಿರುವ ಕೋಷ್ಟಕದ ಬದಲಾಗಿ ಈ ಕೆಳಗಿನಂತೆ ಕೋಷ್ಟಕವನ್ನು ಪ್ರತ್ಯಾಯೋಜಿಸತಕ್ಕದ್ದು. ಅಂದರೆ,-

"ಕೋಷ್ಟಕ"

| ಕ್ರ.ಸಂ | ಪ್ರವರ್ಗ | ಅಧ್ಯಕ್ಷ | | ಉಪಾಧ್ಯಕ್ಷರು | |
|---|---|---|---|---|---|
| | | ಒಟ್ಟು | ಮಹಿಳೆಯರು | ಒಟ್ಟು | ಮಹಿಳೆಯರು |
| 1 | ಅನುಸೂಚಿತ ಜಾತಿ | 35 | 17 | 35 | 17 |
| 2 | ಅನುಸೂಚಿತ ಪಂಗಡ | 16 | 8 | 16 | 8 |
| 3 | <u>ಹಿಂದುಳಿದ ವರ್ಗಗಳು</u><br>1. ಪ್ರವರ್ಗ-ಎ | 30 | 15 | 30 | 15 |
| | 2. ಪ್ರವರ್ಗ-ಬಿ | 7 | 4 | 7 | 4 |
| 4 | ಮೀಸಲಿಡದ ಸಾಮಾನ್ಯ ವರ್ಗ | 88 | 44 | 88 | 44 |
| | ಒಟ್ಟು | **176** | **88** | **176** | **88** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ.ಬಿ.ಧೋತ್ರೆ
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) 1000 ಪ್ರತಿಗಳು)